ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 10–10–2017

## ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ:

ಸವಿರುಚಿ ಸಂಚಾರಿ ಕ್ಯಾಂಟೀನ್ ಹೊಸ ಯೋಜನೆ ಕುರಿತು :

ಶ್ರೀಮತಿ ಭಾರತಿ ಶಂಕರ್, ಅಧ್ಯಕ್ಷರು,
ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು.

ದಿನಾಂಕ: 11–10–2017 ಬುಧವಾರ, ಸಮಯ – ಬೆಳಿಗ್ಗೆ 11.00 ಗಂಟೆಗೆ
ಸ್ಥಳ: ಸ್ತ್ರೀಶಕ್ತಿ ಭವನ, ಸಂತೆಬೀದಿ, ಮಡಿವಾಳ, ಬೆಂಗಳೂರು.

ಸಂಖ್ಯೆ 170/290

## ಪತ್ರಿಕಾ ಪ್ರಕಟಣೆ

# ವಿಧಾನಸೌಧ ವಜ್ರಮಹೋತ್ಸವ – ಜಂಟಿ ಅಧಿವೇಶನದಲ್ಲಿ ರಾಷ್ಟ್ರಪತಿ ಭಾಷಣ

**ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :**

ವಿಧಾನಸೌಧ ಕಟ್ಟಡ ನಿರ್ಮಾಣಗೊಂಡು 60 ವರ್ಷ ತುಂಬಿರುವ ಈ ಸುಸಂದರ್ಭದಲ್ಲಿ "ವಜ್ರಮಹೋತ್ಸವ ಕಾರ್ಯಕ್ರಮ" ಅಂಗವಾಗಿ ಅಕ್ಟೋಬರ್ 25 ಮತ್ತು 26 ರಂದು ಹಮ್ಮಿಕೊಂಡಿರುವ ವಿಶೇಷ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಷ್ಟ್ರದ ಘನತೆವೆತ್ತ ರಾಷ್ಟ್ರಪತಿಗಳು ಮಾತನಾಡಲಿದ್ದಾರೆ.

ಅಕ್ಟೋಬರ್ 25 ರಂದು ಬೆಳಿಗ್ಗೆ 11.00 ರಿಂದ 12.30 ಗಂಟೆವರೆಗೆ ವಿಧಾನಸಭೆಯ ಸಭಾಂಗಣದಲ್ಲಿ ಜಂಟಿ ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿಗಳಿಂದ ಭಾಷಣ. ನಂತರ ಇತ್ತೀಚೆಗೆ ನಿಧನರಾದ ಮಾಜಿ ಸಚಿವ ಕಮರುಲ್ಲಾ ಇಸ್ಲಾಂ ಹಾಗೂ ಇತರೆ ಗಣ್ಯವ್ಯಕ್ತಿಗಳಿಗೆ ಸಂತಾಪ ಸೂಚನೆ. ಭೋಜನದ ನಂತರ ಕರ್ನಾಟಕ ಇತಿಹಾಸ, ನಾಡು, ನುಡಿ, ಭಾಷೆ, ಜಲ, ನೆಲ, ಪ್ರಕೃತಿ ಬಗ್ಗೆ ವಿಶೇಷ ಚರ್ಚೆ.

ಸಂಜೆ 5.00 ಗಂಟೆಗೆ ವಿಧಾನಸೌಧದ ಪೂರ್ವ ದ್ವಾರದ ಮೆಟ್ಟಿಲುಗಳ ಮೇಲೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ರಾಜ್ಯದ ಪರಂಪರೆ, ಕಲೆ, ಸಾಹಿತ್ಯವನ್ನು ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ದಿ. ಕೆಂಗಲ್ ಹನುಮಂತಯ್ಯ, ದಿ. ಕೆ.ಸಿ. ರೆಡ್ಡಿ, ದಿ. ಕಡಿದಾಳ್ ಮಂಜಪ್ಪ ಇವರ ಕುಟುಂಬ ವರ್ಗದವರಿಗೆ ಗೌರವಾರ್ಪಣೆ ಕಾರ್ಯಕ್ರಮ ಮತ್ತು ಕರ್ನಾಟಕ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿ ಶ್ರೇಷ್ಠ ಸಾಧನೆ ಮಾಡಿದ ಮಹನೀಯರಿಗೆ " Life Time Achievement Award" ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ. ರಾಜ್ಯದ ಪರಂಪರೆ, ಕಲೆ, ಸಾಹಿತ್ಯವನ್ನು ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮ. ಹಾಗೂ ವಿಧಾನಸೌಧದ ಮೇಲ್ಮೈ ಮೇಲೆ "3ಡಿ ಮ್ಯಾಪಿಂಗ್' ಪ್ರದರ್ಶನವನ್ನು ಸಹ ಹಮ್ಮಿಕೊಳ್ಳಲಾಗಿದೆ.

ಅಕ್ಟೋಬರ್ 26 ರಂದು ಬೆಳಿಗ್ಗೆ 11.00 ಗಂಟೆಗೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಗಿರೀಶ್ ಕಾಸರವಳ್ಳಿರವರ ನಿರ್ದೇಶನದ "ವಿದಾನಸೌಧದ ಕಟ್ಟಡ ನಿರ್ಮಾಣ", ಟಿ.ಎನ್. ಸೀತರಾಮ್ ನಿರ್ದೇಶನದ "ಕರ್ನಾಟಕ ವಿಧಾನ ಮಂಡಲ ಶಾಸನ ಸಭೆ ನಡೆದು ಬಂದ ಹಾದಿ" ಸಾಕ್ಷ್ಯಚಿತ್ರಗಳ ಪ್ರದರ್ಶನ ಹಾಗೂ ಮಾಸ್ಟರ್ ಕಿಶನ್ ನಿರ್ದೇಶನದ "ವಿಧಾನಸೌಧ 3ಡಿ ವರ್ಚೂಯಲ್ ರಿಯಾಲಿಟಿ" ಚಿತ್ರದ ಪ್ರದರ್ಶನ ನಡೆಯಲಿದೆ.

ವಿಧಾನಸೌಧದ ಪೂರ್ವ ದ್ವಾರದ ಮೆಟ್ಟಿಲುಗಳ ಮೇಲೆ ಸಂಜೆ 5.00 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ರಾಜ್ಯದ ಪರಂಪರೆ, ಕಲೆ, ಸಾಹಿತ್ಯವನ್ನು ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರಾತ್ರಿ 7.00 ರಿಂದ ಗ್ರಾಮಿ ಪ್ರಶಸ್ತಿ ವಿಜೇತ ರಿಕಿ ಕೇಜ್ ಅವರ ತಂಡದಿಂದ ಕರ್ನಾಟಕ ರಾಜ್ಯದ ಜೀವರಾಶಿ ಪ್ರಕೃತಿ ವೈವಿಧ್ಯತೆಯ ಸೊಬಗಿನ ಸುಂದರ ಚಿತ್ರಣದ "ಶಾಂತಿ ಸಂಸಾರ" ಎಂಬ ಸಂಗೀತ ಕಾರ್ಯಕ್ರಮ. ಹಾಗೂ ವಿಧಾನಸೌಧದ ಮೇಲ್ಮೈ ಮೇಲೆ "3ಡಿ ಮ್ಯಾಪಿಂಗ್' ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಸಂಖ್ಯೆ 171/291

## ಮಕ್ಕಳಲ್ಲಿ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿಯನ್ನು ಮೂಡಿಸಲು ರಸಪ್ರಶ್ನೆ ಕಾರ್ಯಕ್ರಮ

**ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :**

ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮದಡಿಯಲ್ಲಿ "ಪ್ರಕೃತಿ ಕೋಜ್-ಆನ್ಲೈನ್ ಎನ್ವಿರಾನ್ನೆಂಟ್ ಕ್ವಿಜ್" ಕಾರ್ಯಕ್ರಮವನ್ನು ಭಾರತ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯವು ಸಂರಕ್ಷಣೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿಯನ್ನು ಮೂಡಿಸಲು ರಸಪ್ರಶ್ನೆ ಕಾರ್ಯಕ್ರಮವನ್ನು ಆಯೋಜಿಸಿದೆ.

"ಪ್ರಕೃತಿ ಕೋಜ್-ಆನ್ಲೈನ್ ಎನ್ವಿರಾನ್ನೆಂಟ್ ಕ್ವಿಜ್" ಕಾರ್ಯಕ್ರಮವು ರಾಜ್ಯಮಟ್ಟದಲ್ಲಿ ಆನ್‌ಲೈನ್ ಮುಖಾಂತರ ನಡೆಯುತ್ತಿದ್ದು ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಅವರ ಜನ್ಮ ದಿನದ ಸ್ಮರಣಾರ್ಥವಾಗಿ ರಸಪ್ರಶ್ನೆ ಕಾರ್ಯಕ್ರಮವು ಸೆಪ್ಟೆಂಬರ್ 25 ರಿಂದ ರಸಪ್ರಶ್ನೆ ಕಾರ್ಯಕ್ರಮವು 5 ಹಂತದಲ್ಲಿ ನಡೆಯುತ್ತಿದೆ. ಮೊದಲ ಎರಡು ಹಂತಗಳು ರಾಜ್ಯ ಮಟ್ಟದಲ್ಲಿ ನಡೆಯಲಿದ್ದು, ಉಳಿದ ಹಂತಗಳು ರಾಷ್ಟ್ರಮಟ್ಟದಲ್ಲಿ ನಡೆಯಲಿದೆ.

ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ 34 ಶೈಕ್ಷಣಿಕ ಜಿಲ್ಲೆಗಳಲ್ಲಿ ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಮತ್ತು ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಪ್ರತಿ ಜಿಲ್ಲೆಯ 250

ಶಾಲೆಗಳನ್ನೊಳಗೊಂಡಂತೆ ಒಟ್ಟು 8500 ಶಾಲೆಗಳಲ್ಲಿ ಇಕೋ-ಕ್ಲಬ್‌ಗಳು ಸ್ಥಾಪನೆಯಾಗಿದ್ದು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನ ಸಂಸ್ಥೆಯು ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ರಾಜ್ಯದ ನೋಡಲ್ ಸಂಸ್ಥೆಯಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 172/292

# ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :

ತೋಟಗಾರಿಕೆ ಇಲಾಖೆ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮದಡಿ 20 ದಿನಗಳ ಭೂದೃಶ್ಯ ತೋಟಗಾರಿಕೆ ಅಭಿವೃದ್ಧಿ ನಿರ್ವಹಣೆ ಬಗ್ಗೆ ನವೆಂಬರ್ 2 ರಿಂದ 27ರವರೆಗೆ ತೋಟಗಾರಿಕೆ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಿದೆ.

ತರಬೇತಿಗಾಗಿ ಆಯ್ಕೆಯಾಗಲು ಅಭ್ಯರ್ಥಿಯು ಕನಿಷ್ಟ 5ನೆ ತರಗತಿ ತೇರ್ಗಡೆಯಾಗಿರಬೇಕು, ಕನ್ನಡ ಓದುವುದು, ಬರೆಯುವುದು ಮತ್ತು ಮಾತನಾಡುವುದು ತಿಳಿದಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 35 ವರ್ಷ. ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ.

ಅರ್ಜಿಗಳನ್ನು ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್ ಬಾಗ್, ಬೆಂಗಳೂರು ಅಥವ ಇಲಾಖಾ ವೆಬ್ ಸೈಟ್ www.horticulture.kar.nic.in ರಲ್ಲಿ ಅಕ್ಟೋಬರ್ 16 ರಿಂದ 25 ರವರೆಗೆ ಪಡೆಯಬಹುದಾಗಿದೆ.

ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ಅಕ್ಟೋಬರ್ 25 ರೊಳಗೆ ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇವರ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9071280906 ಮತ್ತು 080-26564538 ಮೂಲಕ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

*****

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 173/293

# ಅವಧಿ ವಿಸ್ತರಣೆ

ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :

ಕರ್ನಾಟಕ ಶಿಲ್ಪಕಲಾ ಅಕಾಡೆಮಿಯು ಸಾಂಪ್ರದಾಯಿಕ ಮತ್ತು ಸಮಕಾಲೀನ ಶಿಲ್ಪಕಲೆಯ ಹದಿಮೂರನೇ ವಾರ್ಷಿಕ ಶಿಲ್ಪಕಲಾ ಪ್ರದರ್ಶನ–2017 ಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿತ್ತು.

ಅರ್ಜಿಗಳನ್ನು ಶಿಲ್ಪಕೃತಿಗಳನ್ನು ವಿವರಣಾ ಪತ್ರದ ಜೊತೆ ಅಕ್ಟೋಬರ್ 10 ರೊಳಗಾಗಿ ಅಕಾಡೆಮಿ ಕಚೇರಿಗೆ ತಲುಪಿಸಲು ಕೋರಿದ್ದು, ಇದೀಗ ಈ ಅವಧಿಯನ್ನು ಅಕ್ಟೋಬರ್ 23 ರವರೆಗೆ ವಿಸ್ತರಿಸಿದೆ. ಪ್ರವೇಶ ಶುಲ್ಕ ರೂ 300/– ದೊಂದಿಗೆ ಶಿಲ್ಪಕೃತಿಗಳ ಪ್ರದರ್ಶನಕ್ಕೆ ಪ್ರವೇಶ ಪಡೆಯಲಿಚ್ಚಿಸುವವರು ವಿವರಣಾ ಪತ್ರವನ್ನು ಕಚೇರಿ ವೇಳೆಯಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಶಿಲ್ಪಕಲಾ ಅಕಾಡೆಮಿಯಲ್ಲಿ ಅಕಾಡೆಮಿ ಅಂತರ್ಜಾಲ **www.karnatakashilpakalaacademy.org** ದಿಂದ ಪಡೆಯಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ರಿಜಿಸ್ಟ್ರಾರ್, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, 1ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ( ದೂ : 080–22278725) ಇವರನ್ನು ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 174/294

# ವಸತಿ ಕಾರ್ಯಾಗಾರಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ವೃತ್ತಿ ನಿರತ ಕುಶಲ ಕರ್ಮಿಗಳಿಗೆ ವಿಶೇಷ ಘಟಕ ಯೋಜನೆ, ಗಿರಿಜನ ಉಪ ಯೋಜನೆಯಡಿ ಮತ್ತು ಎಸ್‌ಡಿಪಿ ವಸತಿ ಕಾರ್ಯಾಗಾರಗಳನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದಿಂದ ವಸತಿ ರಹಿತ ಕುಶಲಕರ್ಮಿಗಳಿಗೆ ವಸತಿ ಕಾರ್ಯಗಾರ ಒದಗಿಸುವ ಯೋಜನೆಯನ್ನು ಮಂಜೂರು ಮಾಡಿದ್ದು ಈ ಯೋಜನೆಯನ್ವಯ ಪ್ರತಿ ವಸತಿ ಕಾರ್ಯಗಾರದ ನಿರ್ಮಾಣ ವೆಚ್ಚ ಗ್ರಾಮೀಣ ಪ್ರದೇಶದವರಿಗೆ ರೂ 3.00 ಲಕ್ಷ ಹಾಗೂ ನಗರ ಪ್ರದೇಶದವರಿಗೆ ರೂ. 3.25 ಲಕ್ಷಗಳನ್ನು ನಿಗದಿಪಡಿಸಿದೆ.

ಈ ನಿರ್ಮಾಣ ವೆಚ್ಚದಲ್ಲಿ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದಿಂದ ಗ್ರಾಮೀಣ ಪ್ರದೇಶದವರಿಗೆ ಸಹಾಯಧನ ರೂ 1.75 ಲಕ್ಷ. ನಗರದ ಪ್ರದೇಶದವರಿಗೆ ಮತ್ತು ರೂ 2.00 ಲಕ್ಷ ಗ್ರಾಮೀ ಣ ಪ್ರದೇಶದವರಿಗೆ ಕ್ರಮವಾಗಿ ಭರಿಸಲಾಗುವುದು. ಶೇ 10 ರಷ್ಟು ಕುಶಲಕರ್ಮಿಗಳ ವಂತಿಕೆಯೊಂದಿಗೆ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಸಹಾಯಧನ ರೂ 1.00 ಲಕ್ಷಗಳು ಒಳಗೊಂಡಿರುತ್ತದೆ.

2017–18 ನೇ ಸಾಲಿಗೆ ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರು ನಗರ ಜಿಲ್ಲೆಯ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿರುತ್ತದೆ.

ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ನಿಗದಿತ ಅರ್ಜಿ ಜೊತೆಗೆ ಫಲಾನಭವಿಯ ಪಾಸ್‌ಪೋರ್ಟ್ ಅಳತೆ 2 ಪೋಟೋ, ಆಧಾರ ಕಾರ್ಡ್, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್ ಪ್ರತಿ, ವೃತ್ತಿ ನಿರತ ಕುಶಲಕರ್ಮಿ ಪ್ರಮಾಣ ಪತ್ರ, ಕುಶಲಕರ್ಮಿ ಪುರುಷರಾದಲ್ಲಿ ಅವರ ಪತ್ನಿಯ ಹೆಸರಿನಲ್ಲಿ ಹಾಗೂ ಗ್ರಾಮ ಪಂಚಾಯಿತಿಯಿಂದ ಮನೆರಹಿತ ಪ್ರಮಾಣ ಪತ್ರದ ದಾಖಲಾತಿಗಳನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾಕೈಗಾರಿಕಾ ಕೇಂದ್ರ, ರಾಜಾಜಿನಗರ ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು ಅಥವಾ ದೂರವಾಣಿ ಸಂಖ್ಯೆ 23501481, 235011478 ಮೂಲಕ ಸಂಪರ್ಕಿಸಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 175/295

# 15 ದಿನಗಳೊಳಗೆ ರಸ್ತೆಗಳ ಗುಂಡಿ ಮುಚ್ಚುವ ಕಾರ್ಯ ಪೂರ್ಣ

– ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು, ಅಕ್ಟೋಬರ್ 10 ( ಕರ್ನಾಟಕ ವಾರ್ತೆ) :

ಬೆಂಗಳೂರಿನಲ್ಲಿ ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗಿ ಹಾಳಾಗಿರುವ ರಸ್ತೆಗಳ ಗುಂಡಿ ಮುಚ್ಚುವ ಕೆಲಸವನ್ನು ಇನ್ನೂ 15 ದಿನದೊಳಗೆ ಪೂರ್ಣಗೊಳಿಸಲಾಗುವುದು ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಬೆಂಗಳೂರು ಅಭಿವೃದ್ಧಿಗಾಗಿ ನಮ್ಮ ಸರ್ಕಾರ ಹೆಚ್ಚಿನ ಒತ್ತನ್ನು ನೀಡಿ ಕೆಲಸ ಮಾಡಿದೆ. ಮಳೆ ನಿಂತ ನಂತರ ಬೆಂಗಳೂರು ಮಹಾನಗರ ವ್ಯಾಪ್ತಿಯ ಎಲ್ಲಾ ರಸ್ತೆಗಳನ್ನು ದುರಸ್ತಿ ಮಾಡಲಾಗುವುದು ಎಂದರು.

ಭೂಪಸಂದ್ರದಲ್ಲಿ 200 ಕೋಟಿ ರೂ. ಮೌಲ್ಯದ ನಿವೇಶನವನ್ನು ಡಿ. ನೋಟಿಫಿಕೇಶನ್ ಮಾಡಿರುವುದಾಗಿ ವಿರೋಧ ಪಕ್ಷದ ಮುಖಂಡರ ಆರೋಪಕ್ಕೆ ಉತ್ತರಿಸಿದ ಅವರು ಇದು ಸತ್ಯಕ್ಕೆ ದೂರವಾದದ್ದು, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಯಾವುದೇ ಡಿ. ನೋಟಿಫಿಕೇಶನ್ ಮಾಡಿಲ್ಲ, ಸುಮ್ಮನೆ ಆರೋಪ ಮಾಡುವ ಬದಲು ದಾಖಲೆಗಳಿದ್ದರೆ ನೀಡಲಿ, ನಾವು ಪರಿಶೀಲಿಸಿ ಉತ್ತರ ಕೊಡುತ್ತೇವೆ ಎಂದು ತಿಳಿಸಿದರು.